ಈ) ಮಂಡ್ಯ ಆಸ್ಪತ್ರೆಗೆ ಸ್ವಂತ ಕಟ್ಟಡ ಇಲ್ಲದ ಪ್ರಯುಕ್ತ ಇದನ್ನು ನಿರ್ಮಾಣ ಮಾಡಲು ಮಂಡ್ಯದ ಜಿಲ್ಲಾಧಿಕಾರಿಗಳು, ಮಂಡ್ಯ ಗ್ರಾಮ, ಸರ್ವೆ ನಂ. 77 ರಲ್ಲಿರುವ 15 ಗುಂಟೆ ಜಮೀನನ್ನು ಮಂಜೂರು ಮಾಡಿರುತ್ತಾರೆ. ಆ ಜಮೀನಿನಲ್ಲಿ ಆಯುರ್ವೇದ ಆಸ್ಪತ್ರೆ ಕಟ್ಟಡ ಕಟ್ಟುವ ಬಗ್ಗೆ ಲೋಕೋಪಯೋಗಿ ಇಲಾಖೆಯ ರೂ. 65.00 ಲಕ್ಷಗಳ ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಹಾಗೂ ಪ್ರಸಕ್ತ 2002-2003ನೇ ಸಾಲಿನಲ್ಲಿ ಈ ಕಾಮಗಾರಿಗೆ ರೂ. 16.00 ಲಕ್ಷ ಆಯವ್ಯಯ ಬಿಡುಗಡೆ ಮಾಡಿದೆ. ಈ ಕಟ್ಟಡ ನಿರ್ಮಾಣ ಕಾರ್ಯವನ್ನು ಲೋಕೋಪಯೋಗಿ ಇಲಾಖೆ, ಮಂಡ್ಯ ಇವರಿಗೆ ವಹಿಸಲಾಗಿದೆ.

ಹಿರೇಕೆರೂರು ತಾಲ್ಲೂಕಿನಲ್ಲಿ ಸರ್ಕಾರಿ ಪದವಿ ಕಾಲೇಜಿಗೆ ಸ್ವಂತ ಕಟ್ಟಡ

218 (534) ಶ್ರೀ ಬನ್ನಿಕೋಡ್ ಬಿ.ಹೆಚ್. (ಹಿರೇಕೆರೂರು) - ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಿರೇಕೆರೂರು ತಾಲ್ಲೂಕು ಕೇಂದ್ರ ಸ್ಥಳದಲ್ಲಿ ಸರ್ಕಾರಿ ಪದವಿ ಕಾಲೇಜು ಇರುವುದು ಸರ್ಕಾರಕ್ಕೆ ತಿಳಿದಿದೆಯೇ ; ಈ ಕಾಲೇಜು ಪ್ರಾರಂಭಗೊಂಡು ಎಷ್ಟು ವರ್ಷವಾಯಿತು ;

ಆ) ಈ ಕಾಲೇಜಿಗೆ ಸ್ವಂತ ಕಟ್ಟಡವಿದೆಯೇ ; ಇಲ್ಲದಿದ್ದಲ್ಲಿ, ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿಲ್ಲವೇ ;

ಇ) ಬಂದಿದ್ದರೆ, ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ಸ್ಥಳ ಕಾಯ್ದಿರಿಸಲಾಗಿದೆಯೇ ; ಆ ಸ್ಥಳ ಈಗ ಯಾರ ಸುಪರ್ದಿನಲ್ಲಿದೆ ; ಕಟ್ಟಡದ ಕಾಮಗಾರಿಗೆ ಯೋಜನೆ ಸಿದ್ಧಗೊಳಿಸಲಾಗಿದೆಯೇ ;

ಈ) ಕಾಮಗಾರಿ ಕೆಲಸ ಪ್ರಾರಂಭಿಸಲು ವಿಳಂಬ ನೀತಿ ಅನುಸರಿಸಲು ಕಾರಣವೇನು ; ಈ ಕಟ್ಟಡದ ಕಾಮಗಾರಿಯನ್ನು ಎಂದು ಪ್ರಾರಂಭಿಸಲಾಗುವುದು ;

ಉ) ಈ ಕಾಮಗಾರಿಯ ಅಂದಾಜು ಮೊತ್ತವೆಷ್ಟು ; ಪ್ರಸ್ತುತ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆ ಮಾಡಿದೆ ; ಈ ಕಟ್ಟಡದ ಕಾಮಗಾರಿ ಪೂರ್ಣಗೊಳಿಸಲು ಬೇಕಾಗುವ ಸಮಯವೆಷ್ಟು?

ಡಾ॥ ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು)

ಅ) ತಿಳಿದಿದೆ.

ಸದರಿ ಕಾಲೇಜು 1982 ರಲ್ಲಿ ಪ್ರಾರಂಭವಾಗಿದೆ.

ಆ) ಸ್ವಂತ ಕಟ್ಟಡ ಇರುವುದಿಲ್ಲ

ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಇ) ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ಸ್ಥಳ ಕಾಯ್ದಿರಿಸಲಾಗಿದೆ. ಸ್ಥಳ ಈಗ ಇಲಾಖೆಯ ಸುಪರ್ದಿನಲ್ಲಿದೆ. ಕಟ್ಟಡದ ಕಾಮಗಾರಿಗೆ ಯೋಜನೆ ಸಿದ್ಧಗೊಳಿಸಲಾಗಿದೆ.

ಈ) ಆಯವ್ಯಯದ ಕೊರತೆಯಿಂದಾಗಿ ಕಾಮಗಾರಿ ಕೆಲಸ ಪ್ರಾರಂಭಿಸಲಾಗಿಲ್ಲ. ಸದರಿ ಕಾಲೇಜಿನ ಕಟ್ಟಡಕ್ಕೆ ಹುಡ್ಕೋ ಸಂಸ್ಥೆಯ ನೆರವಿನಡಿಯಲ್ಲಿ ಪ್ರಸ್ತಾವನೆ ಮಾಡಿದ್ದು ಆ ಸಂಸ್ಥೆಯಿಂದ ನೆರವು ದೊರೆತ ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಉ) ಈ ಕಾಮಗಾರಿಯ ಅಂದಾಜು ಮೊತ್ತ ರೂ. 98.00 ಲಕ್ಷಗಳು

ಪ್ರಸ್ತುತ ಸಾಲಿನಲ್ಲಿ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ

ಕಟ್ಟಡ ಪ್ರಾರಂಭಿಸಿದ 8 ರಿಂದ 10 ತಿಂಗಳೊಳಗೆ ಕಟ್ಟಡವನ್ನು ಪೂರೈಸಲಾಗುವುದು.

ಪಿರಿಯಾಪಟ್ಟಣ ವಿಧಾನ ಸಭಾ ಕ್ಷೇತ್ರದಲ್ಲಿನ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವುದು

220 (549) ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) - ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪಿರಿಯಾಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಬೆಟ್ಟದಪುರ ಹಾಗೂ ಕೆ.ಆರ್.ನಗರ ತಾಲ್ಲೂಕು ಚುಂಚನಕಟ್ಟೆ ಹೋಬಳಿಗೆ ಸೇರಿದ ಹೊಸೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಮಂಜೂರಾತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ;

ಇ) ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಪ್ರಸ್ತಾವನೆ ಬಂದಿರುವುದಿಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪಿರಿಯಾಪಟ್ಟಣ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯನ್ನು ಮೇಲ್ದರ್ಜೆಗೇರಿಸುವುದು

221 (551) ಶ್ರೀ ಬಸವರಾಜು ಹೆಚ್.ಸಿ. (ಪಿರಿಯಾಪಟ್ಟಣ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪಿರಿಯಾಪಟ್ಟಣ ನಗರದಲ್ಲಿ ಹಾಲಿ ಇರುವ ಸಂಯುಕ್ತ ಪದವಿಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಪಟ್ಟಣದಲ್ಲಿ ಬಾಲಕಿಯರಿಗಾಗಿಯೇ ಪ್ರತ್ಯೇಕ ಪದವಿಪೂರ್ವ ಕಾಲೇಜು ಅವಶ್ಯಕವಾಗಿದ್ದು, ಪಟ್ಟಣದಲ್ಲಿರುವ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯನ್ನು ಪದವಿಪೂರ್ವ ಕಾಲೇಜನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಬಂದಿದೆಯೇ?

ಇ) ಬಂದಿದ್ದಲ್ಲಿ, ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆಯೇ?

ಈ) ಹಾಗಿದ್ದಲ್ಲಿ, ಯಾವಿಂದಿನ ಶೈಕ್ಷಣಿಕ ವರ್ಷದಿಂದ ಶಾಲೆಯನ್ನು ಮೇಲ್ದರ್ಜೆಗೇರಿಸಲಾಗುವುದೇ? (ಮಾಹಿತಿ ನೀಡುವುದು).

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಇಲ್ಲ

ಆ)ಇ)ಈ) ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ನಗರದ ಪದವಿ ಪೂರ್ವ ಕಾಲೇಜುಗಳಲ್ಲಿರುವ ವಿದ್ಯಾರ್ಥಿ ಸಂಖ್ಯೆ ಈ ಕೆಳಕಂಡಂತಿದೆ.